**ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಸಿದ್ದು ಸವದಿ (ತೇರದಾಳ)**

**ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ :1314ಕ್ಕೆ ಉತ್ತರ**

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗದ ಯಾವ ಯಾವ ಸಮುದಾಯದ ಜನರಿಗೆ ಯಾವ ರೀತಿಯ ಸೌಲಭ್ಯ ಒದಗಿಸಲಾಗುತ್ತಿದೆ (ಸಂಪೂರ್ಣ ಮಾಹಿತಿ ಒದಗಿಸುವುದು); | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಸವಿತಾ ಸಮಾಜದ ಪಾರಂಪರಿಕ ಕಲೆಗಳಾದ ಡೋಲು ಮತ್ತು ನಾದಸ್ವರ ಸಂಗೀತ ಕಲೆಗೆ ಪುನಶ್ಚೇತನ ನೀಡುವ ಸವಿತಾ ಸಮುದಾಯಕ್ಕೆ ಮಾತ್ರ ಸಮುದಾಯ ಸೌಲಭ್ಯ ಒದಗಿಸಲಾಗಿರುತ್ತದೆ. ಇನ್ನುಳಿದ ಯಾವುದೇ ಒಂದು ಸಮುದಾಯದ ಜನಾಂಗದವರಿಗೆ ಕಾರ್ಯಕ್ರಮ ರೂಪಿಸದೇ ಹಿಂದುಳಿದ ವರ್ಗದ ಸಮಗ್ರ ಜನಾಂಗದವರಿಗಾಗಿ ಕಾರ್ಯಕ್ರಮವನ್ನು ಅನುಷ್ಠಾನ ಗೊಳಿಸಿ ಸೌಲಭ್ಯವನ್ನು ಮಂಜೂರು ಮಾಡಲಾಗುತ್ತಿದೆ.<br><br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಅನುಷ್ಠಾನ ಗೊಳಸುತ್ತಿರುವ ಯೋಜನೆಗಳ ಮಾಹಿತಿಯನ್ನು ಅನುಬಂಧ-1ರಲ್ಲಿ ಒದಗಿಸಿದೆ. |
| ಆ) | 2018 ಮತ್ತು 2019-20ನೇ ಸಾಲಿನಲ್ಲಿ ಯಾವ ಯಾವ ಸೌಲಭ್ಯಗಳನ್ನು ಎಷ್ಟು ಫಲಾನುಭವಿಗಳಿಗೆ ಒದಗಿಸಲಾಗಿದೆ (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ಒದಗಿಸುವುದು) | 2018-19ನೇ ಸಾಲಿನಲ್ಲಿ ಇಲಾಖೆಯ ವತಿಯಿಂದ ಅನುಷ್ಠಾನ ಗೊಳಸುತ್ತಿರುವ ಕಾರ್ಯಕ್ರಮಗಳಲ್ಲಿ ಕ್ಷೇತ್ರವಾರು ಸೌಲಭ್ಯ ಪಡೆದ ಫಲಾನುಭವಿಗಳ ಮಾಹಿತಿಯನ್ನು ಅನುಬಂಧ-2ರಲ್ಲಿ ಒದಗಿಸಿದೆ.<br><br>2019-20ನೇ ಸಾಲಿಗೆ ಸಂಬಂಧಿಸಿದಂತೆ, ಫಲಾನುಭವಿಗಳನ್ನು ಆಯ್ಕೆ ಮಾಡಲು ಅರ್ಜಿಯನ್ನು ಆಹ್ವಾನಿಸಲಾಗುತ್ತಿದ್ದು, ಆಯ್ಕೆ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |
| ಇ) | ಸದರಿ ಸಮುದಾಯಗಳಿಗೆ ಸೌಲಭ್ಯಗಳನ್ನು ಒದಗಿಸುವಲ್ಲಿ ಕ್ಷೇತ್ರವಾರು ಬಹಳಷ್ಟು ತಾರತಮ್ಯವಾಗುತ್ತಿರುವುದು ನಿಜವೇ; ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಹಿಂದುಳಿದ ಜನಾಂಗದವರ ಸಮಗ್ರ ಅಭಿವೃದ್ಧಿಗಾಗಿ ಕಾರ್ಯಕ್ರಮವನ್ನು ರೂಪಿಸಿ ಅನುಷ್ಠಾನ ಗೊಳಸಲಾಗುತ್ತಿದೆ ಇದರಿಂದಾಗಿ ಸಮುದಾಯಗಳಿಗೆ ಸೌಲಭ್ಯಗಳನ್ನು ಒದಗಿಸುವಲ್ಲಿ ಕ್ಷೇತ್ರವಾರು ತಾರತಮ್ಯ ಉಂಟಾಗಿರುವುದಿಲ್ಲ. |
| ಈ) | ಗಂಗಾ ಕಲ್ಯಾಣಕ್ಕೆ ಈಗಿರುವ ಅನುದಾನ ಕೊರತೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅನುದಾನ ಹೆಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ನಿಗಮಗಳ ವತಿಯಿಂದ ಮಾಹಿತಿ ಪಡೆಯ ಬೇಕಾಗಿರುತ್ತದೆ. |
| ಉ) | ಈ ಹಿಂದೆ ಮಂಜೂರಾದ ಫಲಾನುಭವಿಗಳಿಗೆ ಪಂಪ್‌ಸೆಟ್ ಗಳನ್ನು ನೀಡದಿರುವುದು ಪ್ರಕರಣಗಳಲ್ಲಿ ಅಂತಹ ಗುತ್ತಿಗೆದಾರರ ಮೇಲೆ ಯಾವ ಕ್ರಮ ಜರುಗಿಸಲಾಗುವುದು? | ನಿಗಮಗಳ ವತಿಯಿಂದ ಮಾಹಿತಿ ಪಡೆಯ ಬೇಕಾಗಿರುತ್ತದೆ. |

ಆಯುಕ್ತರು
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು**



E:\LALC Question\2018-19\Assembly\July-2019\LAQ-1314.docx